**ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ,**

**ಹೆಚ್.ಡಿ.ಕೋಟೆ**

**ಸಿ.ಸಿ.ನಂ. 51/2023**

ಫಿರ್ಯಾದಿ : ಸರ್ಕಾರದ ಪರವಾಗಿ ಸರಗೂರು ಪೋಲೀಸ್ ಠಾಣೆ

ವಿರುದ್ಧ

ಆರೋಪಿಗಳು : 1. ಶ್ರೀಮತಿ ಮಹಾದೇವಮ್ಮ
ಕೋಂ ಸೋಮಯ್ಯ, 65 ವರ್ಷ

2. ಗೋಪಾಲಸ್ವಾಮಿ
ಬಿನ್ ಸೋಮಯ್ಯ, 40 ವರ್ಷ

3. ಶ್ರೀಮತಿ ತುಳಸಿ
ಬಿನ್ ಸೋಮಯ್ಯ, 30 ವರ್ಷ

4. ಶ್ರೀಮತಿ ಜಯಾ
ಕೋಂ ನಾಗಯ್ಯ, 38 ವರ್ಷ

5. ಶ್ರೀಮತಿ ಪಾರ್ವತಿ
ಕೋಂ ಗೋಪಾಲಸ್ವಾಮಿ, 30 ವರ್ಷ

6. ಸಿದ್ಧರಾಜು
ಬಿನ್ ಕೆಂಪಸಿದ್ದಯ್ಯ, 42 ವರ್ಷ

ಎಲ್ಲರ ವಾಸಃ ಹಾದನೂರು ಗ್ರಾಮ,
ಸರಗೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ದೋಷಾರೋಪಣೆ**

ಶ್ರೀ ಸಂದೇಶ್ ಪ್ರಭು. ಬಿ (ಬಿ.ಎ (ಲಾ). ಎಲ್.ಎಲ್.ಬಿ, ಪಿ ಜಿ ಡಿ ಹೆಚ್ ಆರ್ ಎಂ) ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ಹೆಚ್.ಡಿ.ಕೋಟೆ ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 05.11.2022 ರಂದು ಬೆಳಿಗ್ಗೆ 09.00 ಗಂಟೆಯ ಸಮಯದಲ್ಲಿ ಸರಗೂರು ಪೋಲಿಸ್ ಠಾಣಾ ಸರಹದ್ದು, ಹಾದನೂರು ಗ್ರಾಮದ ಚಾಸಾ–1 ರಿಂದ 3 ರವರು ತಮಗೆ ಸೇರಿದ ಖಾಲಿ ನಿವೇಶನವು ತಮ್ಮ ಮಾವನಾದ ಲೇ. ಪಾಪಣ್ಣರವರು ಲೇ. ಸ್ವಾಮಿ ಅಲಿಯಾಸ್ ಸೋಮಯ್ಯ ರವರಿಂದ ಬರೆಸಿಕೊಂಡಿದ್ದ ನಿವೇಶನದಲ್ಲಿ ಮನೆಯನ್ನು ಕಟ್ಟಿಸುತ್ತಿದ್ದಾಗ ಆರೋಪಿಗಳಾದ ನೀವುಗಳು ಏಕೊದ್ದೇಶದಿಂದ ಸೇರಿ ಗುಂಪು ಕಟ್ಟಿಕೊಂಡು ಚಾಸಾ–1 ರವರು ಮನೆ ಕಟ್ಟಿಸುತ್ತಿದ್ದ ಜಾಗಕ್ಕೆ ಅತಿಕ್ರಮ ಪ್ರವೇಶ ಮಾಡಿ ಚಾಸಾ–1 ರವರ ಜೊತೆ ತೀಟೆ ಜಗಳವನ್ನು ತೆಗೆದಿದ್ದು, ಆ ಮೂಲಕ ಆರೋಪಿಗಳಾದ ನೀವುಗಳು ಭಾ.ದಂ.ಸಂ.ಕಲಂ. **143** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಎರಡನೇಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ, ಅಕ್ರಮ ಗುಂಪು ಕಟ್ಟಿಕೊಂಡು ಬಂದು ಚಾಸಾ–1 ರವರ ಜೊತೆ ದೊಂಬಿ ಗಲಾಟೆಯನ್ನು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವುಗಳು ಭಾ.ದಂ.ಸಂ.ಕಲಂ. **147** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಮೂರನೇಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ ಅಕ್ರಮ ಗುಂಪು ಕಟ್ಟಿಕೊಂಡು ಕೈಯ್ಯಲ್ಲಿ ದೊಣ್ಣೆಗಳನ್ನು (ಮಾರಕಾಸ್ತ್ರ) ಹಿಡಿದುಕೊಂಡು ಬಂದು ಚಾಸಾ–1 ರವರಿಗೆ ಸಾಮಾನ್ಯ ಸ್ವರೂಪದ ಗಾಯವುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವುಗಳು ಭಾ.ದಂ.ಸಂ.ಕಲಂ. **148** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ನಾಲ್ಕನೇಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ, ಚಾಸಾ-1 ರವರಿಗೆ ಏತಕ್ಕೆ ನಮಗೆ ಸೇರಿದ ಜಾಗದಲ್ಲಿ ಮನೆ ಕಟ್ಟುತ್ತಿದ್ದೀರಿ ಎಂದು ಬಾಯಿಗೆ ಬಂದಂತೆ ನನ್ನ ಮಕ್ಕಳೇ ಮುಂಡೇರಾ ಎಂದು ಬೈದಿದ್ದು, ಚಾಸಾ-1 ರವರು ಏತಕ್ಕೆ ನಮ್ಮ ಜಾಗಕ್ಕೆ ಬಂದು ನಮಗೆ ಬೈಯ್ಯುತ್ತಿದ್ದೀರಾ ಅಂತಾ ಕೇಳಿದಾಗ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಏನೆ ಮುಂಡೆ ನೀನು ಮಾತನಾಡುವುದು ಎಂದು ಹಾಗೂ 4 ನೇ ಆರೋಪಿಯಾದ ನೀವು ಚಾಸಾ-3 ರವರಿಗೆ ನನ್ನ ಮಗನೇ ಅಂತಾ ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ಬೈದಿದ್ದು, ಆ ಮೂಲಕ ಚಾಸಾ-1 ಮತ್ತು 3 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಶಾಂತಿ ಭಂಗವನ್ನು ಉಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನ ಪಡಿಸಿದ್ದು, ಆ ಮೂಲಕ ಆರೋಪಿಗಳಾದ ನೀವುಗಳು ಭಾ.ದಂ.ಸಂ.ಕಲಂ. **504** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಐದನೇಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ, 1 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ನೂಕಾಡಿ, ಕೈಗಳಿಂದ ಮೈ ಕೈಗೆ ಹೊಡೆದಿದ್ದು 3 ನೇ ಆರೋಪಿಯಾದ ನೀವು ಚಾಸಾ-1 ರವರ ಮೈ ಕೈಗೆ ಕಾಲಿನಿಂದ ತುಳಿದಿದ್ದು, 4 ನೇ ಆರೋಪಿಯಾದ ನೀವು ಚಾಸಾ-3 ರವರಿಗೆ ಕಾಲಿನಿಂದ ಒದ್ದಿದ್ದು, ಚಾಸಾ-2 ಮತ್ತು 3 ರವರನ್ನು 5 ನೇ ಆರೋಪಿಯಾದ ನೀವು ನೆಲಕ್ಕೆ ಬೀಳಿಸಿ ಕೈಗಳಿಂದ ಮೈಕೈಗೆ ಹೊಡೆದು ಕಾಲಿನಿಂದ ಒದ್ದು ಸಾಮಾನ್ಯ ಸ್ವರೂಪದ ಗಾಯವುಂಟು ಮಾಡಿದ್ದು, ಆ ಮೂಲಕ ಆರೋಪಿಗಳಾದ ನೀವುಗಳು ಭಾ.ದಂ.ಸಂ.ಕಲಂ.**323** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಆರನೇಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ, 1 ನೇ ಆರೋಪಿಯಾದ ನೀವು ಚಾಸಾ–1 ರವರನ್ನು ಮಾನಭಂಗ ಮಾಡುವ ಉದ್ದೇಶ ಇಟ್ಟುಕೊಂಡು ಹಿಂದಿನಿಂದ 3 ನೇ ಆರೋಪಿಯಾದ ನೀವು ಚಾಸಾ–2 ರವರ ತಲೆಯ ಜುಟ್ಟನ್ನು ಹಿಡಿದು ಎಳೆದಾಡಿ ಚಾಸಾ–1 ರವರು ತೊಟ್ಟಿದ್ದ ನೈಟಿ ಬಟ್ಟೆಯನ್ನು ಹರಿದು ಹಾಕಿ ಮಾನಭಂಗ ಮಾಡಲು ಪ್ರಯತ್ನಿಸಿದ್ದು, ಆ ಮೂಲಕ ಆರೋಪಿಗಳಾದ ನೀವುಗಳು ಭಾ.ದಂ.ಸಂ.ಕಲಂ.**354** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಏಳನೇಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ, 3 ನೇ ಆರೋಪಿಯಾದ ನೀವು ಚಾಸಾ–1 ರವರನ್ನು ತಳ್ಳಿ ಬೀಳಿಸಿದ್ದು, ಆ ಮೂಲಕ ಆರೋಪಿಯಾದ ನೀವು ಭಾ.ದಂ.ಸಂ.ಕಲಂ.**341** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಎಂಟನೇಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ, 3 ನೇ ಆರೋಪಿಯಾದ ನೀವು ಚಾಸಾ 3 ರವರು ಚಾಸಾ–1 ರವರನ್ನು ಬಿಡಿಸಲು ಹೋದಾಗ 2 ನೇ ಆರೋಪಿಯಾದ ನೀವು ತಮ್ಮ ಕೈಯ್ಯಲ್ಲಿದ್ದ ದೊಣ್ಣೆಯಿಂದ ಚಾಸಾ– 3 ರವರ ಮೈಕೈಗೆ ಹೊಡೆಯಲು ಬಂದಾಗ ಚಾಸಾ 3 ರವರು ತಪ್ಪಿಸಿಕೊಂಡಿದ್ದು ಆ ದೊಣ್ಣೆಯ ಏಟು ಚಾಸಾ–1 ರವರ ಎದೆಯ ಭಾಗಕ್ಕೆ ಬಿದ್ದು ಚಾಸಾ–1 ರವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಆಗಿದ್ದು, ಆ ಮೂಲಕ ಆರೋಪಿಯಾದ ನೀವು ಭಾ.ದಂ.ಸಂ.ಕಲಂ.**324** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಒಂಭತ್ತನೇಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ, 6 ನೇ ಆರೋಪಿಯಾದ ನೀವು ಇವರದು ಗ್ರಾಮದಲ್ಲಿ ಅತಿಯಾಯಿತು ಬಿಡಬೇಡಿ ಕೊಲೆ ಮಾಡಿ ಅಂತ ಕುಮ್ಮಕ್ಕು ನೀಡಿದ್ದು, ಆ ಮೂಲಕ ಆರೋಪಿಗಳಾದ ನೀವುಗಳು ಭಾ.ದಂ.ಸಂ.ಕಲಂ.**114** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ಕೊನೆಯದಾಗಿ ಅದೇ ದಿನ, ಅದೇ ಸಮಯ, ಅದೇ ಸ್ಥಳದಲ್ಲಿ ಆರೋಪಿತರಾದ ನೀವುಗಳು ಏಕೋದ್ದೇಶದಿಂದ, ಚಾಸಾ 1 ರಿಂದ 3 ರವರುಗಳಿಗೆ ಕೊಲೆ ಬೆದರಿಕೆ ಹಾಕಿ ಆ ಮೂಲಕ ಚಾಸಾ-1 ರಿಂದ 3 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು ಮಾಡಿದ್ದು, ಆ ಮೂಲಕ ಆರೋಪಿತರುಗಳಾದ ನೀವುಗಳು ಭಾ.ದಂ.ಸಂ.ಕಲಂ **506** ಸಹವಾಚಕ ಕಲಂ 149 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ನನ್ನ ಅಧಿಕಾರ ವ್ಯಾಪ್ತಿಯ ಪರಿಮಿತಿಯೊಳಗೆ ಮಾಡಿರುತ್ತೀರಿ.

ದಿನಾಂಕಃ

(ಸಂದೇಶ್ ಪ್ರಭು ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಹೆಚ್ ಡಿ ಕೋಟೆ.

**ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ, ಹೆಚ್.ಡಿ.ಕೋಟೆ**

**ಸಿ.ಸಿ.ನಂ. 51/2023**

ಫಿರ್ಯಾದಿ : ಸರ್ಕಾರದ ಪರವಾಗಿ ಸರಗೂರು ಪೋಲೀಸ್ ಠಾಣೆ

ವಿರುದ್ಧ

ಆರೋಪಿಗಳು : 1. ಶ್ರೀಮತಿ ಮಹಾದೇವಮ್ಮ
ಕೋಂ ಸೋಮಯ್ಯ, 65 ವರ್ಷ
ವಾಸಃ ಹಾದನೂರು ಗ್ರಾಮ,
ಸರಗೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ಆರೋಪಿಯ ಹೇಳಿಕೆ**

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

ಪ್ರಶ್ನೆ : ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿದ್ದೀರಾ?

ಉತ್ತರ

ಪ್ರಶ್ನೆ : ಈ ದೋಷಾರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗ ಬೇಕೆನ್ನುವಿರೋ?

ಉತ್ತರ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ

(ಸಂದೇಶ್ ಪ್ರಭು ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಹೆಚ್ ಡಿ ಕೋಟೆ.

# <u>ಹಿರಿಯ ಸಿವಿಲ್  ಜಡ್ಜ್ ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ,</u>
# <u>ಹೆಚ್.ಡಿ.ಕೋಟೆ</u>

## <u>ಸಿ.ಸಿ.ನಂ. 51/2023</u>

ಫಿರ್ಯಾದಿ : ಸರ್ಕಾರದ ಪರವಾಗಿ ಸರಗೂರು ಪೋಲೀಸ್ ಠಾಣೆ

ವಿರುದ್ಧ

ಆರೋಪಿಗಳು : 2. ಗೋಪಾಲಸ್ವಾಮಿ
ಬಿನ್ ಸೋಮಯ್ಯ, 40 ವರ್ಷ
ವಾಸಃ ಹಾದನೂರು ಗ್ರಾಮ,
ಸರಗೂರು ತಾಲ್ಲೂಕು,
ಮೈಸೂರು ಜಿಲ್ಲೆ.

### <u>ಆರೋಪಿಯ ಹೇಳಿಕೆ</u>

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

ಪ್ರಶ್ನೆ : ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿದ್ದೀರಾ?

ಉತ್ತರ

ಪ್ರಶ್ನೆ : ಈ ದೋಷಾರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗ ಬೇಕೆನ್ನುವಿರೋ?

ಉತ್ತರ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ

(ಸಂದೇಶ್ ಪ್ರಭು ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಹೆಚ್ ಡಿ ಕೋಟೆ.

# **ಹಿರಿಯ ಸಿವಿಲ್  ಜಡ್ಜ್ ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ,**
# **ಹೆಚ್.ಡಿ.ಕೋಟೆ**

## **ಸಿ.ಸಿ.ನಂ. 51/2023**

ಫಿರ್ಯಾದಿ : ಸರ್ಕಾರದ ಪರವಾಗಿ ಸರಗೂರು ಪೋಲೀಸ್ ಠಾಣೆ

ವಿರುದ್ಧ

ಆರೋಪಿಗಳು : 3. ಶ್ರೀಮತಿ ತುಳಸಿ
ಬಿನ್ ಸೋಮಯ್ಯ, 30 ವರ್ಷ
ವಾಸಃ ಹಾದನೂರು ಗ್ರಾಮ,
ಸರಗೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ಆರೋಪಿಯ ಹೇಳಿಕೆ**

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

ಪ್ರಶ್ನೆ : ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿದ್ದೀರಾ?

ಉತ್ತರ

ಪ್ರಶ್ನೆ : ಈ ದೋಷಾರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗ ಬೇಕೆನ್ನುವಿರೋ?

ಉತ್ತರ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ

(ಸಂದೇಶ್ ಪ್ರಭು ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಹೆಚ್ ಡಿ ಕೋಟೆ.

**ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ,**
**ಹೆಚ್.ಡಿ.ಕೋಟೆ**

**ಸಿ.ಸಿ.ನಂ. 51/2023**

ಫಿರ್ಯಾದಿ : ಸರ್ಕಾರದ ಪರವಾಗಿ ಸರಗೂರು ಪೋಲೀಸ್ ಠಾಣೆ

ವಿರುದ್ಧ

ಆರೋಪಿಗಳು : 4. ಶ್ರೀಮತಿ ಜಯಾ
ಕೋಂ ನಾಗಯ್ಯ, 38 ವರ್ಷ
ವಾಸಃ ಹಾದನೂರು ಗ್ರಾಮ,
ಸರಗೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ಆರೋಪಿಯ ಹೇಳಿಕೆ**

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

ಪ್ರಶ್ನೆ : ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿದ್ದೀರಾ?

ಉತ್ತರ

ಪ್ರಶ್ನೆ : ಈ ದೋಷಾರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗ ಬೇಕೆನ್ನುವಿರೋ?

ಉತ್ತರ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಢೀಕರಿಸಿರುತ್ತೇನೆ.)

ದಿನಾಂ

(ಸಂದೇಶ್ ಪ್ರಭು ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಹೆಚ್ ಡಿ ಕೋಟೆ.

# **ಹಿರಿಯ ಸಿವಿಲ್  ಜಡ್ಜ್ ಮತ್ತು ಪ್ರ ದ ನ್ಯಾದಂ.ರವರ ನ್ಯಾಯಾಲಯ, ಹೆಚ್.ಡಿ.ಕೋಟೆ**

## **ಸಿ.ಸಿ.ನಂ. 51/2023**

ಫಿರ್ಯಾದಿ : ಸರ್ಕಾರದ ಪರವಾಗಿ ಸರಗೂರು ಪೋಲೀಸ್ ಠಾಣೆ

ವಿರುದ್ಧ

ಆರೋಪಿಗಳು : 5. ಶ್ರೀಮತಿ ಪಾರ್ವತಿ
ಕೋಂ ಗೋಪಾಲಸ್ವಾಮಿ, 30 ವರ್ಷ
ವಾಸಃ ಹಾದನೂರು ಗ್ರಾಮ,
ಸರಗೂರು ತಾಲ್ಲೂಕು,
ಮೈಸೂರು ಜಿಲ್ಲೆ.

### **ಆರೋಪಿಯ ಹೇಳಿಕೆ**

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

ಪ್ರಶ್ನೆ : ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿದ್ದೀರಾ?

ಉತ್ತರ

ಪ್ರಶ್ನೆ : ಈ ದೋಷಾರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗ ಬೇಕೆನ್ನುವಿರೋ?

ಉತ್ತರ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ

(ಸಂದೇಶ್ ಪ್ರಭು ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಹೆಚ್ ಡಿ ಕೋಟೆ.

## ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರ.ದ ನ್ಯಾ.ದಂ.ರವರ ನ್ಯಾಯಾಲಯ, ಹೆಚ್.ಡಿ.ಕೋಟೆ

## ಸಿ.ಸಿ.ನಂ. 51/2023

ಫಿರ್ಯಾದಿ : ಸರ್ಕಾರದ ಪರವಾಗಿ ಸರಗೂರು ಪೋಲೀಸ್ ಠಾಣೆ

ವಿರುದ್ಧ

ಆರೋಪಿಗಳು : 6. ಸಿದ್ಧರಾಜು
ಬಿನ್ ಕೆಂಪಸಿದ್ದಯ್ಯ, 42 ವರ್ಷ
ವಾಸಃ ಹಾದನೂರು ಗ್ರಾಮ,
ಸರಗೂರು ತಾಲ್ಲೂಕು,
ಮೈಸೂರು ಜಿಲ್ಲೆ.

**ಆರೋಪಿಯ ಹೇಳಿಕೆ**

ಈ ಮೇಲಿನ ದೋಷಾರೋಪಣೆಗಳಿಗಾಗಿ ಆರೋಪಿತರಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದೆಂದು ನಿರ್ದೇಶಿಸಿರುತ್ತೇನೆ.

ಪ್ರಶ್ನೆ : ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿ ತಿಳಿದುಕೊಂಡಿದ್ದೀರಾ?

ಉತ್ತರ

ಪ್ರಶ್ನೆ : ಈ ದೋಷಾರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗ ಬೇಕೆನ್ನುವಿರೋ?

ಉತ್ತರ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ

(ಸಂದೇಶ್ ಪ್ರಭು ಬಿ.)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಹೆಚ್ ಡಿ ಕೋಟೆ.